**All India Radio: Bangalore**
**Regional Bulletin In Kannada**
**18.01.2026 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**18.01.2026 / 2.30 p.m.**

**<><><><>**

ಮುಖ್ಯಾಂಶಗಳು

1. ಳ್ಳಾರಿ ಪ್ರಕರಣ ಬಿಜೆಪಿ ಜನಾಂದೋಲನದ ಹಿಂದೆ ರಾಜಕೀಯ ಉದ್ದೇಶ - ಮುಖ್ಯಮಂತ್ರಿ ಸಿದ್ದರಾಮಯ್ಯ ಆರೋಪ
2. ಉಡುಪಿ ಶ್ರೀ ಕೃಷ್ಣ ಮಠದಲ್ಲಿ ಅದ್ದೂರಿ ಪರ್ಯಾಯ ಮಹೋತ್ಸವ
3. ಲಕ್ಕುಂಡಿಯಲ್ಲಿ ಮೂರನೇ ದಿನಕ್ಕೆ ಕಾಲಿಟ್ಟ ಉತ್ಖನನ ಕಾರ್ಯ ; ಪುರಾತನ ಶಿವಲಿಂಗ, ಪಾಣಿಪೀಠ ಪತ್ತೆ
4. ವಿಜಯ್ ಹಜಾರೆ ಕ್ರಿಕೆಟ್ ಟ್ರೋಫಿ : ಫೈನಲ್ ಪಂದ್ಯದಲ್ಲಿಂದು ವಿದರ್ಭ ವಿರುದ್ಧ ಟಾಸ್ ಗೆದ್ದ ಸೌರಾಷ್ಟ್ರ ತಂಡ ಫೀಲ್ಡಿಂಗ್ ಆಯ್ಕೆ

<><><><>

ಬಿಜೆಪಿ ಅಧಿಕಾರದಲ್ಲಿದ್ದಾಗ ಯಾವ ಪ್ರಕರಣವನ್ನೂ ಸಿಬಿಐ ತನಿಖೆಗೆ ಒಪ್ಪಿಸಿರಲಿಲ್ಲ. ಹೀಗಾಗಿ ಪ್ರಶ್ನಿಸಲು ಬಿಜೆಪಿಗೆ ಯಾವುದೇ ನೈತಿಕತೆಯಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಮೈಸೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಳ್ಳಾರಿ ಪ್ರಕರಣಕ್ಕೆ ಸಂಬಂಧಿಸಿದಂತೆ ಬಿಜೆಪಿಯ ಜನಾಂದೋಲನದ ಹಿಂದೆ ರಾಜಕೀಯ ಉದ್ದೇಶವಿದೆ ಎಂದು ದೂರಿದರು. ವಿಕಸಿತ ಭಾರತ ಜಿ ರಾಮ್ ಜಿ ಕಾಯ್ದೆ ಕುರಿತು ಚರ್ಚಿಸಲು ವಿಶೇಷ ಅಧಿವೇಶನ ಕರೆಯಲಾಗಿದೆ ಎಂದು ಅವರು ತಿಳಿಸಿದರು. ಇದೇ ವೇಳೆ ಲೋಕಾಯುಕ್ತ ದಾಳಿ ಕುರಿತಂತೆ ಕಾನೂನು ಕ್ರಮಕ್ಕೆ ಸರ್ಕಾರ ಅಡ್ಡಿಪಡಿಸುವುದಿಲ್ಲ ಎಂದು ಸ್ಪಷ್ಟಪಡಿಸಿದರು.

**ಧ್ವನಿ : ಮುಖ್ಯಮಂತ್ರಿ ಸಿದ್ದರಾಮಯ್ಯ**

ನಂತರ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಮೈಸೂರು ಜಿಲ್ಲೆಯ ನಂಜನಗೂಡು ತಾಲೂಕಿನ ಸುತ್ತೂರು ಜಾತ್ರಾ ಮಹೋತ್ಸವ ಅಂಗವಾಗಿ ಏರ್ಪಡಿಸಿರುವ ಕೃಷಿ ವಿಚಾರ ಸಂಕಿರಣವನ್ನು ಉದ್ಘಾಟಿಸಿದರು.

<><><>

ಉಡುಪಿ ಕೃಷ್ಣ ಮಠದಲ್ಲಿ ಪರ್ಯಾಯ ಮಹೋತ್ಸವ ಅದ್ದೂರಿಯಾಗಿ ನಡೆಯಿತು. ಇಂದು ಬೆಳಗ್ಗೆ ೫ ಗಂಟೆ ೪೫ ನಿಮಿಷದ ಶುಭ ಮುಹೂರ್ತದಲ್ಲಿ ಅಕ್ಷಯ ಪಾತ್ರೆ ಸ್ವೀಕರಿಸುವ ಮೂಲಕ ವೇದ ವರ್ಧನ ತೀರ್ಥರು, ಮುಂದಿನ ೨ ವರ್ಷಗಳ ಕಾಲ ಶ್ರೀ ಕೃಷ್ಣನ ಪೂಜೆ ಮಾಡುವ ಅಧಿಕಾರ ಪಡೆದುಕೊಂಡರು. ಶಿರೂರು ಮಠದ ವೇದವರ್ಧನ ತೀರ್ಥರು ಮೊದಲ ಬಾರಿಗೆ ಸರ್ವಜ್ಞ ಪೀಠಾರೋಹಣ ಮಾಡಿದ್ದಾರೆ. ಇಂದು ಮುಂಜಾನೆ ಸುಮಾರು ೨ ಗಂಟೆಯಿಂದ ಕಾಪು ಬಳಿಯ ದಂಡತೀರ್ಥದಲ್ಲಿ  ತೀರ್ಥಸ್ನಾನ ಮುಗಿಸಿ, ಬಳಿಕ ಜೋಡುಕಟ್ಟೆಗೆ ಶ್ರೀ ವೇದವರ್ಧನ ತೀರ್ಥ ಶ್ರೀ ಪಾದರು ಆಗಮಿಸಿದರು. ಅಷ್ಟ ಮಠಗಳ ಮಠಾಧೀಶರ ಸಮ್ಮುಖದಲ್ಲಿ ಪಟ್ಟದ ದೇವರಿಗೆ ಪೂಜೆ ಸಲ್ಲಿಸುವ ಮೂಲಕ ವಿಜೃಂಬಣೆಯ ಮೆರವಣಿಗೆಗೆ ಚಾಲನೆ ನೀಡಲಾಯಿತು. ಜೋಡುಕಟ್ಟೆಯಿಂದ ಪ್ರಾರಂಭವಾದ ಈ ಮೆರವಣಿಗೆಯಲ್ಲಿ ಚಂಡೆವಾದನ, ಬಗೆ ಬಗೆಯ ವೇಷ, ಹುಲಿವೇಷ, ಯಕ್ಷಗಾನ, ಶಂಖನಾದ ಹಾಗೂ ಪುರಾಣದ ಕಥೆ ಸಾರುವ ಟ್ಯಾಬ್ಲೋಗಳು ಸೇರಿದಂತೆ ಸುಮಾರು ೧೦೦ ಕ್ಕೂ ಅಧಿಕ ತಂಡಗಳು ಮೆರವಣಿಗೆಯಲ್ಲಿ ಭಾಗವಹಿಸಿದ್ದವು. ಬಳಿಕ ಅಕ್ಷಯ ಪಾತ್ರೆ ಸ್ವೀಕಾರ, ಸರ್ವಜ್ಞ ಪೀಠಾರೋಹಣ, ಧಾರ್ಮಿಕ ಕಾರ್ಯಕ್ರಮ ವಿಜೃಂಭಣೆಯಿಂದ ಜರುಗಿತು. ದೇಶ, ವಿದೇಶಗಳಿಂದ ಭಕ್ತರ ಸಮೂಹವೇ ಹರಿದುಬಂದಿದ್ದು, ಪರ್ಯಾಯವನ್ನು ಕಣ್ತುಂಬಿಕೊಂಡು ಸಂತಸ ವ್ಯಕ್ತಪಡಿಸಿದರು.

<><><>

ಗದಗ ಜಿಲ್ಲೆಯ ಲಕ್ಕುಂಡಿ ಗ್ರಾಮದಲ್ಲಿ ಉತ್ಖನನ ಕಾರ್ಯ ಮೂರನೇ ದಿನಕ್ಕೆ ಕಾಲಿಟ್ಟದೆ. ಲಕ್ಕುಂಡಿ ಗ್ರಾಮದ ಕೋಟೆ ವೀರಭದ್ರೇಶ್ವರ ದೇವಸ್ಥಾನದ ಬಳಿ ಪ್ರಾರಂಭವಾದ ಉತ್ಖನನ ಕಾರ್ಯದಲ್ಲಿ ಪುರಾತನ ಶಿವಲಿಂಗ ಪಾಣಿಪೀಠ ದೊರತಿದೆ. ಉತ್ಖನನ ಕಾರ್ಯಕ್ಕೆ ಅನುಕೂಲವಾಗಲೆಂದು ಕೋಟೆ ವೀರಭದ್ರೇಶ್ವರ ದೇವಸ್ಥಾನದ ಬಳಿ ಇರುವ ವಿದ್ಯಾಭವನ ಸಮಿತಿಯ ಶಿಕ್ಷಣ ಸಂಸ್ಥೆಯ ತೆರವು ಮಾಡುವ ಸಂದರ್ಭದಲ್ಲಿ ಸಣ್ಣ ಪ್ರಮಾಣದ ಶಿವಲಿಂಗ ಪತ್ತೆಯಾಗಿದೆ. ಇದರ ಜೊತೆಗೆ ಕೋಟೆ ಗೋಡೆ ಪತ್ತೆಯಾಗಿದೆ. ಉತ್ಖನನ ಕಾರ್ಯವನ್ನು ಮುಂದೆ ಯಾವ ರೀತಿಯಲ್ಲಿ ಕೈಗೊಳ್ಳುವ ಕುರಿತು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ್ ಅವರ ನೇತೃತ್ವದಲ್ಲಿ ಜಿಲ್ಲಾಡಳಿತದ ಅಧಿಕಾರಿಗಳು, ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆಯ ಮತ್ತು ಲಕ್ಕುಂಡಿ ಅಭಿವೃದ್ಧಿ ಪ್ರಾಧಿಕಾರದ ಸದಸ್ಯರ ಸಭೆ ಲಕ್ಕುಂಡಿ ಗ್ರಾಮದಲ್ಲಿ ಇಂದು ಸಂಜೆ ಜರುಗಲಿದೆ.

<><><><>

ವಿವಿಧ ಕಲಾ ಪ್ರಕಾರಗಳ ಮೂಲಕ ವಿದ್ಯಾರ್ಥಿಗಳಲ್ಲಿ ತುಳು ಭಾಷೆಯ ಬಗ್ಗೆ ಅಭಿರುಚಿ, ಅಭಿಮಾನ ಮೂಡಿಸುವ ಕಾರ್ಯ ಶ್ಲಾಘನೀಯ ಎಂದು ಕೆ.ಎಸ್.ಆರ್.ಟಿ.ಸಿ. ಮಂಗಳೂರು ವಿಭಾಗೀಯ ನಿಯಂತ್ರಣಾಧಿಕಾರಿ ರಾಜೇಶ್ ಶೆಟ್ಟಿ ಹೇಳಿದ್ದಾರೆ. ಕರ್ನಾಟಕ ತುಳು ಸಾಹಿತ್ಯ ಅಕಾಡೆಮಿಯು ಪ್ರೌಢಶಾಲಾ ವಿದ್ಯಾರ್ಥಿಗಳಿಗಾಗಿ ಮಂಗಳೂರಿನ ತುಳುಭವನದಲ್ಲಿ ಹಮ್ಮಿಕೊಂಡ 'ಜೋಕ್ಲೆ ಕಲಾ ಚಾತುರ್ಯ' ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಶಾಲಾ-ಕಾಲೇಜು ಹಂತದಲ್ಲಿ ವಿವಿಧ ತುಳು ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ತುಳು ಭಾಷೆ ಹಾಗೂ ತುಳುನಾಡಿನ ಸಂಸ್ಕೃತಿ ಬಗ್ಗೆ ವಿಚಾರಗಳನ್ನು ಯುವ ಜನತೆಗೆ ತಿಳಿಸಿಕೊಡಲು ಸಾಧ್ಯ. ಈ ನಿಟ್ಟಿನಲ್ಲಿ ಕರ್ನಾಟಕ ತುಳು ಸಾಹಿತ್ಯ ಅಕಾಡೆಮಿಯ ಕೆಲಸ ಅಭಿನಂದನೀಯ ಎಂದರು. ಕಾರ್ಯಕ್ರಮದಲ್ಲಿ ತುಳು ಸಾಹಿತ್ಯ ಅಕಾಡೆಮಿ ಅಧ್ಯಕ್ಷ ತಾರಾನಾಥ ಗಟ್ಟಿ ಉಪಸ್ಥಿತರಿದ್ದರು.

<><><><>

ಹೊಳೆಯಲ್ಲಿ ಈಜಲು ತೆರಳಿದ್ದ ಇಬ್ಬರು ವಿದ್ಯಾರ್ಥಿಗಳು ನೀರು ಪಾಲಾದ ಘಟನೆ ಕೊಡಗು ಜಿಲ್ಲೆಯ ಮಾದಾಪುರ ಹೊಳೆಯಲ್ಲಿ ನಿನ್ನೆ ನಡೆದಿದೆ. ಪಿಯುಸಿ ವ್ಯಾಸಂಗ ಮಾಡುತ್ತಿದ್ದ ಸುಂಟಿಕೊಪ್ಪದ ನಿವಾಸಿಗಳಾದ ೧೬ ವರ್ಷದ ಮಹಮ್ಮದ್ ರಾಯಿಜ್ ಹಾಗೂ ಮಹಮ್ಮದ್ ನಿಹಾಲ್ ಮೃತ ದುರ್ದೈವಿಗಳಾಗಿದ್ದಾರೆ. ಕಾಲೇಜು ಮುಗಿಸಿ ಮನೆಗೆ ತೆರಳುವ ಸಂದರ್ಭ ಮಾದಾಪುರ ಹೊಳೆಯಲ್ಲಿ ಈಜಲು ನೀರಿಗಿಳಿದಿದ್ದ ವಿದ್ಯಾರ್ಥಿಗಳು, ಸುಳಿಯಲ್ಲಿ ಸಿಲುಕಿ ಸಾವನ್ನಪ್ಪಿದ್ದಾರೆ ಎಂದು ತಿಳಿದುಬಂದಿದೆ.

<><><><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಏಪ್ರಿಲ್‌ವರೆಗೆ ೯೦ ದಿನಗಳ ಕಾಲ ವಿಶೇಷ ಮಧ್ಯಸ್ಥಿಕೆ ಅಭಿಯಾನ ಹಮ್ಮಿಕೊಳ್ಳಲಾಗಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಬಿ.ಎಸ್.ರೇಖಾ ತಿಳಿಸಿದ್ದಾರೆ. ಈ ಕುರಿತು ಮಾಹಿತಿ ನೀಡಿರುವ ಅವರು, ಮಧ್ಯಸ್ಥಿಕೆಯಿಂದ ವ್ಯಾಜ್ಯಗಳನ್ನು ಪರಿಣಾಮಕಾರಿಯಾಗಿ, ಶೀಘ್ರಗತಿಯಲ್ಲಿ ಮತ್ತು ಕಡಿಮೆ ವೆಚ್ಚದಲ್ಲಿ ಇತ್ಯರ್ಥ ಪಡಿಸಿಕೊಳ್ಳಬಹುದಾಗಿದೆ. ಜಿಲ್ಲಾ ಮತ್ತು ತಾಲೂಕು ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳನ್ನು ನ್ಯಾಯಾಲಯಗಳ ಆವರಣದಲ್ಲಿರುವ ಮಧ್ಯಸ್ಥಿಕೆ ಕೇಂದ್ರಗಳಿಗೆ ಕಳುಹಿಸಿ,

ಉಭಯ ಕಡೆಯವರ ಒಪ್ಪಿಗೆಯ ಮೇರೆಗೆ ರಾಜಿ ಸಂಧಾನದ ಮೂಲಕ ಪ್ರಕರಣಗಳನ್ನು ಇತ್ಯರ್ಥ ಪಡಿಸಿಕೊಳ್ಳಬಹುದು ಎಂದು ವಿವರಿಸಿದರು. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ತಾಲೂಕು ನ್ಯಾಯಾಲಯಗಳ ಆವರಣದಲ್ಲಿರುವ ಮಧ್ಯಸ್ಥಿಕೆ ಕೇಂದ್ರಗಳಲ್ಲಿ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಸದಸ್ಯ ಕಾರ್ಯದರ್ಶಿಯವರ ಕಚೇರಿಯ ದೂರವಾಣಿ ಸಂಖ್ಯೆ ೦೮೦-೨೨೨೨೨೯೧೯ ಕ್ಕೆ ಸಂಪರ್ಕಿಸಬಹುದು ಎಂದು ಅವರು ಮಾಹಿತಿ ನೀಡಿದರು.

<><><>

ಪ್ರತಿ ವರ್ಷದಂತೆ ಈ ಬಾರಿಯೂ ಗಣರಾಜ್ಯೋತ್ಸವವನ್ನು ವಿಜೃಂಭಣೆಯಿಂದ ಆಚರಿಸಲು ಅಗತ್ಯ ಸಿದ್ಧತೆ ಕೈಗೊಳ್ಳಲು ಎಲ್ಲಾ ಇಲಾಖೆಗಳು ಸಮನ್ವಯದಿಂದ ಕಾರ್ಯ ನಿರ್ವಹಿಸಬೇಕು ಎಂದು ದಕ್ಷಣ ಕನ್ನಡ ಅಪರ ಜಿಲ್ಲಾಧಿಕಾರಿ ರಾಜು ಕೆ. ಸೂಚಿಸಿದ್ದಾರೆ. ದಕ್ಷಿಣ ಕನ್ನಡ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಗಣರಾಜ್ಯೋತ್ಸವ ಆಚರಣೆ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ವ್ಯವಸ್ಥಿತವಾಗಿ ಗಣರಾಜ್ಯೋತ್ಸವ  ಆಚರಿಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು. ಎಲ್ಲಾ ಇಲಾಖೆಯ ಸಿಬ್ಬಂದಿ ಕಡ್ಡಾಯವಾಗಿ ಕಾರ್ಯಕ್ರಮದಲ್ಲಿ ಭಾಗವಹಿಸಲು ಆಯಾ ಇಲಾಖೆ ಅಧಿಕಾರಿಗಳು ಸೂಕ್ತ  ಕ್ರಮ ವಹಿಸಬೇಕು ಎಂದು ನಿರ್ದೇಶಿಸಿದರು. ಕುಡಿಯುವ ನೀರಿನ ವ್ಯವಸ್ಥೆ, ತುರ್ತು ಚಿಕಿತ್ಸೆಗೆ ಆಂಬುಲೆನ್ಸ್ ನಿಯೋಜನೆ ಸೇರಿದಂತೆ ಮೂಲಸೌಕರ್ಯ ಒದಗಿಸಲು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಅಗತ್ಯ ಕ್ರಮಕೈಗೊಳ್ಳಬೇಕು ಎಂದು ಅವರು ಸೂಚಿಸಿದರು. ಸಭೆಯಲ್ಲಿ ಮಂಗಳೂರು ಉಪವಿಭಾಗಾಧಿಕಾರಿ ಮೀನಾಕ್ಷಿ ಆರ್ಯ, ಹೆಚ್ಚುವರಿ ಪೊಲೀಸ್ ಆಧೀಕ್ಷಕ ಅನಿಲ್ ಕುಮಾರ್ ಉಪಸ್ಥಿತರಿದ್ದರು.

<><><>

ಮಾವು ಬೆಳೆಗಾರರಿಗಾಗಿ ಕೋಲಾರ ಜಿಲ್ಲೆಯ ಶ್ರೀನಿವಾಸಪುರ ತಾಲೂಕಿನ ತೋಟಗಾರಿಕೆ ಕಚೇರಿ ಸಮೀಪದ ಮಾರುತಿ ಸಭಾ ಭವನದಲ್ಲಿ ನಾಳೆ ಮಾವು ಬೆಳೆಯ ಸಮಗ್ರ ಪೋಷಕಾಂಶ ನಿರ್ವಹಣೆ, ಕೀಟ, ರೋಗ ನಿಯಂತ್ರಣ, ರಫ್ತು ಮಾರುಕಟ್ಟೆಗೆ ಉತ್ತೇಜನ ಮತ್ತು ಮಾವು ಬೆಳೆ ವಿಮೆ ಕಾರ್ಯಾಗಾರ ಆಯೋಜಿಸಲಾಗಿದೆ.  ರಾಜ್ಯ ಮಾವು ಅಭಿವೃದ್ಧಿ ಮತ್ತು ಮಾರುಕಟ್ಟೆ ನಿಗಮ, ತೋಟಗಾರಿಕೆ ಇಲಾಖೆ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಮಾವು ಬೆಳೆಗಾರರ ಸಂಘದ ಸಹಯೋಗದೊಂದಿಗೆ ಈ ಕಾರ್ಯಾಗಾರ ನಡೆಯಲಿದೆ.

<><><><>

ಉತ್ತರ ಕನ್ನಡ ಜಿಲ್ಲೆಯ ಕುಮಟಾದ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ-ಉದ್ಯೋಗ ತರಬೇತಿ ಸಂಸ್ಥೆ ವತಿಯಿಂದ ಇದೇ ೨೩ರಿಂದ ಫೆಬ್ರವರಿ ೨೧ರವರೆಗೆ ಗೃಹಬಳಕೆಯ ಉಪಕರಣಗಳಾದ ಮಿಕ್ಸರ್, ಗ್ರ್ಯಾಂಡರ್, ಪ್ಯಾನ್, ಪಂಪ್ ಸೆಟ್ ಮತ್ತು ವೈರಿಂಗ್ ಉಚಿತ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ. ತರಬೇತಿಯು ಊಟ ಮತ್ತು ವಸತಿ ಸಹಿತ ಉಚಿತವಾಗಿರುತ್ತದೆ. ಅಭ್ಯರ್ಥಿಯು ನಿರುದ್ಯೋಗಿಯಾಗಿದ್ದು, ಸ್ವ-ಉದ್ಯೋಗದಲ್ಲಿ ಆಸಕ್ತಿ ಹೊಂದಿರಬೇಕು. ವಯೋಮಿತಿ ೧೮ ರಿಂದ ೪೫ ವರ್ಷಗಳು. ಆಸಕ್ತರು, ನಿರ್ದೇಶಕರು, ಕೆನರಾ ಬ್ಯಾಂಕ ಗ್ರಾಮೀಣ ಸ್ವ-ಉದ್ಯೋಗ ತರಬೇತಿ ಸಂಸ್ಥೆ, ಕೈಗಾರಿಕಾ ಪ್ರದೇಶ, ಹೆಗಡೆ ರಸ್ತೆ, ಕುಮಟಾ-೫೮೧೩೪೩, ಉತ್ತರ ಕನ್ನಡ ಜಿಲ್ಲೆ ಇವರಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ ೯೪೪೯೮೬೦೦೦೭ ಅಥವಾ ೯೬೨೦೯೬೨೦೦೪, ಸಂಪರ್ಕಿಸುವಂತೆ ಸಂಸ್ಥೆಯ ನಿರ್ದೇಶಕರು ತಿಳಿಸಿದ್ದಾರೆ.

<><><><>

ಬೆಂಗಳೂರಿನಲ್ಲಿಂದು ವಿಜಯ್ ಹಜಾರೆ ಕ್ರಿಕೆಟ್ ಪಂದ್ಯಾವಳಿಯ ಫೈನಲ್ ಪಂದ್ಯದಲ್ಲಿ ಸೌರಾಷ್ಟ್ರ ಮತ್ತು ವಿದರ್ಭ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ಸೌರಾಷ್ಟ್ರ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ. ಮೊದಲು ಬ್ಯಾಟಿಂಗ್ ಮಾಡುತ್ತಿರುವ ವಿದರ್ಭ ತಂಡ, ಇತ್ತೀಚಿನ ವರದಿ ಬಂದಾಗ, ೧೪ ಓವರ್‌ಗಳಿಗೆ ಯಾವುದೇ ವಿಕೆಟ್‌ಗಳಿಗೆ ೬೪ ರನ್ ಮಾಡಿ, ಆಡುತ್ತಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>